ಅಧ್ಯಕ್ಷರು : ನಾನು ನಿಮ್ಮೊಂದಿಗಿದ್ದೇನೆ. ನಿಮ್ಮ ಅಭಿಪ್ರಾಯ ಮತ್ತು ನನ್ನ ಅಭಿಪ್ರಾಯ ಒಂದೇ ಆಗಿದ್ದು, ಅದನ್ನೇ ಮಾನ್ಯ ಸಚಿವರಿಗೆ ಒಪ್ಪಿಸುತ್ತಿದ್ದೇನೆ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ : ಮಾನ್ಯ ಅಧ್ಯಕ್ಷರೆ, ಅಲ್ಲಿಯ ತನಕ ಸದನವನ್ನು ಮುಂದೂಡಬೇಕು.

(ಗೊಂದಲ)

ಅಧ್ಯಕ್ಷರು : ತಾವು ಸೂಕ್ಷ್ಮವಾಗಿ ಹೇಳಿದ್ದೀರಿ, ಆಯಿತು.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ : ತಾವು ಸದನವನ್ನು ಮುಂದೂಡಬೇಕು. ಈ ಸಂಬಂಧ ಅವರಿಗೆ ಒಂದು ಎಚ್ಚರಿಕೆ ಕೊಡಬೇಕು.

ಅಧ್ಯಕ್ಷರು : ಅದೆಲ್ಲಾ ಬೇಡ. ಈಗ ಸಂತಾಪ ಸೂಚನೆ.

1. ಸಂತಾಪ ಸೂಚನಾ ನಿರ್ಣಯ

ವಿಷಯ : ಮಾಜಿ ಸಚಿವರಾದ ಶ್ರೀ ಎನ್. ಚಿಕ್ಕೇಗೌಡರು ನಿಧನ ಹೊಂದಿರುವ ಬಗ್ಗೆ.

ಅಧ್ಯಕ್ಷರು : ರಾಜ್ಯದ ಮಾಜಿ ಸಚಿವರಾಗಿದ್ದ **ಎನ್.ಚಿಕ್ಕೇಗೌಡ** ಅವರು ನಿಧನ ಹೊಂದಿರುವುದನ್ನು ಈ ಸದನಕ್ಕೆ ಅತ್ಯಂತ ವಿಷಾದಿಂದ ತಿಳಿಸಬಯಸುತ್ತೇನೆ.

ಎನ್.ಚಿಕ್ಕೇಗೌಡ ಅವರು ದಿನಾಂಕ 13ನೇ ಜೂನ್ 1926ರಂದು ಹೊಸಕೋಟೆ ತಾಲ್ಲೂಕು ದೊಡ್ಡಗಟ್ಟಿಗನಬ್ಬೆ ಹಳ್ಳಿಯಲ್ಲಿ ಜನಿಸಿರುತ್ತಾರೆ. ದಿವಂಗತರು ಕೃಷಿ ಪದವೀಧರರಾಗಿದ್ದು, ವೃತ್ತಿಯಲ್ಲಿ ಕೃಷಿಕರಾಗಿದ್ದರು. ಎನ್.ಚಿಕ್ಕೇಗೌಡ ಅವರು ಕೃಷಿ ಮಹಾ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರಾಗಿ ಮೈಸೂರು ರಾಜ್ಯದ ಯುವ ರೈತರ ಸಂಘಟನೆಯ ಕಾರ್ಯದರ್ಶಿಯಾಗಿ, ತಾಲ್ಲೂಕು ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾಗಿ, ಬೆಂಗಳೂರು ಹಾಲು ಉತ್ಪಾದಕರ ಸಹಕಾರ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿರುತ್ತಾರೆ.

ದಿವಂಗತರು 4, 5, 7 ಮತ್ತು 9ನೇ ವಿಧಾನಸಭೆಗೆ ಹೊಸಕೋಟೆ ವಿಧಾನಸಭಾ ಕ್ಷೇತ್ರದಿಂದ ಆಯ್ಕೆಗೊಂಡು ಸೇವೆ ಸಲ್ಲಿಸಿರುತ್ತಾರೆ. ಅಲ್ಲದೆ, 1972ರಲ್ಲಿ ಪಶು ಸಂಗೋಪನಾ ರಾಜ್ಯ ಸಚಿವರಾಗಿ ಮತ್ತು 1973ರಿಂದ 1977ರವರೆಗೆ ಹಾಗೂ 1991ರಿಂದ 1992ರವರೆಗೆ ಕೃಷಿ ಹಾಗೂ ಪಶು ಸಂಗೋಪನಾ ಸಚಿವರಾಗಿ ಕಾರ್ಯ ನಿರ್ವಹಿಸಿರುತ್ತಾರೆ.

ಎನ್.ಚಿಕ್ಕೇಗೌಡ ಅವರು ದಿನಾಂಕ 4.6.2013ರಂದು ನಿಧನ ಹೊಂದಿರುತ್ತಾರೆ.

ಶ್ರೀ ಆರ್.ವಿ.ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) : ಮಾನ್ಯ ಅಧ್ಯಕ್ಷರೆ, ಮಾನ್ಯ ಶ್ರೀ ಎನ್.ಚಿಕ್ಕೇಗೌಡರು ನನಗೆ ಬಹಳ ಆತ್ಮೀಯ ಸ್ನೇಹಿತರಾಗಿದ್ದರು. ಅವರು ಪಶು ಸಂಗೋಪನಾ ಸಚಿವರಾಗಿದ್ದಾಗ ರೈತರಿಗೆ, ಕೃಷಿ ಕಾರ್ಮಿಕರಿಗೆ ಸಾಕಷ್ಟು ರೀತಿಯಲ್ಲಿ ಸಹಾಯ ಮಾಡುತ್ತಿದ್ದರು. ಮುಖ್ಯವಾಗಿ ರೈತರ ಪರವಾಗಿ ಹೋರಾಟ ನಡೆಸಿದ ವ್ಯಕ್ತಿಯಾಗಿದ್ದರು. ಅವರ ನಿಧನದಿಂದ ರಾಜ್ಯಕ್ಕೆ ತುಂಬಲಾರದ ನಷ್ಟವುಂಟಾಗಿದೆ. ಅವರು ಶಾಸಕರಾಗಿ, ಮಂತ್ರಿಯಾಗಿ ಕಾರ್ಯ ನಿರ್ವಹಿಸಿದ್ದಾರೆ. ನಾನು ಅವರ ಆತ್ಮಕ್ಕೆ ಶಾಂತಿ ಕೋರುತ್ತಾ, ಅವರು ಮಾಡಿದ ಕೆಲಸ-ಕಾರ್ಯಗಳು ನಮಗೆ ಆದರ್ಶವಾಗಲೆಂದು ಬಯಸಿ, ತಾವು ಮಂಡಿಸಿರುವ ಸಂತಾಪ ಸೂಚನಾ ನಿರ್ಣಯಕ್ಕೆ ಸಂಪೂರ್ಣವಾಗಿ ಬೆಂಬಲ ವ್ಯಕ್ತಪಡಿಸುತ್ತೇನೆ.

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ-ಧಾರವಾಡ ಕೇಂದ್ರ) : ಸನ್ಮಾನ್ಯ ಅಧ್ಯಕ್ಷರೆ, ಮಾನ್ಯ ಶ್ರೀ ಎನ್.ಚಿಕ್ಕೇಗೌಡರು ನಿಧನರಾಗಿರುವ ಹಿನ್ನೆಲೆಯಲ್ಲಿ ತಾವು ಸಂತಾಪ ಸೂಚನಾ ನಿರ್ಣಯ ಮಂಡಿಸಿದ್ದೀರಿ. ಮಾನ್ಯ ಚಿಕ್ಕೇಗೌಡರು ವಿಧಾನ ಸಭೆಗೆ 4 ಸಲ ಆಯ್ಕೆಯಾಗಿದ್ದು, ಸಹಕಾರ ಚಳವಳಿಯಲ್ಲಿ ಧುಮುಕಿ ಸಹಕಾರಿ ರಂಗದಲ್ಲಿ ಹೆಚ್ಚಿನ ರೀತಿಯಲ್ಲಿ ಸೇವೆ ಸಲ್ಲಿಸಿದ್ದಾರೆ. ಸಹಕಾರಿ ರಂಗದಲ್ಲಿ ಬೆಂಗಳೂರು, ಮೈಸೂರು ಮತ್ತು ಬೆಂಗಳೂರು ಗ್ರಾಮಾಂತರ ಪ್ರದೇಶದಲ್ಲಿ ಜಾಗೃತಿಯುಂಟು ಮಾಡುವ ಮೂಲಕ, ಸಹಕಾರಿ ರಂಗಕ್ಕೆ ಹೆಚ್ಚಿನ ಒತ್ತು ನೀಡಿ, ಬೆಂಗಳೂರು ಹಾಲು ಉತ್ಪಾದಕರ ಸಹಕಾರ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದಾರೆ. ಅವರು ವಿಧಾನಸಭೆಗೆ ಸತತವಾಗಿ ನಾಲ್ಕು ಬಾರಿ ಆಯ್ಕೆಯಾಗಿದ್ದರೆಂದರೆ, ಅವರು ಎಷ್ಟೊಂದು ಜನಪ್ರಿಯ ವ್ಯಕ್ತಿಯಾಗಿ, ಜನಪರ ಕೆಲಸ ಮಾಡುತ್ತಿದ್ದರು ಎನ್ನುವುದಕ್ಕೆ ಇದು ಸಾಕ್ಷಿ ಎಂದು ಈ ಸಂದರ್ಭದಲ್ಲಿ ಹೇಳಬಯಸುತ್ತೇನೆ. ಅವರು ಪಶು ಸಂಗೋಪನಾ ಸಚಿವರಾಗಿಯೂ ಕೆಲಸ ಮಾಡಿದ್ದಾರೆ. ಅವರು ಕೃಷಿ ಸಚಿವರಾಗಿದ್ದಾಗ ಕೃಷಿಗೆ ಹೆಚ್ಚು ಒತ್ತು ನೀಡುವ ಕೆಲಸ ಮಾಡಿದ್ದಾರೆ. ಅವರು ನಿಧನವಾಗಿರುವುದರಿಂದ ವೈಯಕ್ತಿಕವಾಗಿ ನನಗೂ ಸಾಕಷ್ಟು ನಷ್ಟವುಂಟಾಗಿದೆ. ಅವರ ಅಗಲಿಕೆಯಿಂದ ಉಂಟಾಗಿರುವ ದುಃಖವನ್ನು ಅವರ ಕುಟುಂಬ ವರ್ಗದವರಿಗೆ ಭರಿಸುವ ಶಕ್ತಿಯನ್ನು ದೇವರು ದಯಪಾಲಿಸಿ, ಅವರ ಆತ್ಮಕ್ಕೆ ಶಾಂತಿ ದೊರಕಲೆಂದು ಕೋರುತ್ತೇನೆ. ತಾವು ಮಂಡಿಸಿರುವ ಸಂತಾಪ ಸೂಚನಾ ನಿರ್ಣಯವನ್ನು ಬೆಂಬಲಿಸುತ್ತೇನೆ.

ಶ್ರೀ ಬಿ.ಎಸ್. ಯಡಿಯೂರಪ್ಪ (ಶಿಕಾರಿಪುರ) : ಮಾನ್ಯ ಅಧ್ಯಕ್ಷರೆ, ತಾವು ಮಂಡಿಸಿರುವ ಸಂತಾಪ ಸೂಚನಾ ನಿರ್ಣಯಕ್ಕೆ ದನಿಗೂಡಿಸುತ್ತಾ, ಶ್ರೀ

ಎನ್.ಚಿಕ್ಕೇಗೌಡರು ರಾಜ್ಯದ ಮಾಜಿ ಸಚಿವರಾಗಿ ವಿಧಾನ ಸಭೆಗೆ ನಾಲ್ಕು ಸಲ ಆಯ್ಕೆಯಾಗಿ, ಕೃಷಿ ಮತ್ತು ಪಶು ಸಂಗೋಪನಾ ಸಚಿವರಾಗಿ ತಮ್ಮದೇ ಆದ ಸೇವೆಯನ್ನು ರಾಜ್ಯಕ್ಕೆ ಸಲ್ಲಿಸಿದ ಒಬ್ಬ ಧೀಮಂತ ನಾಯಕರು. ಅವರು ಚಿಕ್ಕ ವಯಸ್ಸಿನಲ್ಲಿಯೇ ಕೃಷಿ ಮಹಾ ವಿದ್ಯಾಲಯದ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರಾಗಿ, ರಾಜ್ಯದ ಯುವ ರೈತರ ಸಂಘಟನೆಯ ಕಾರ್ಯದರ್ಶಿಯಾಗಿ, ತಾಲ್ಲೂಕು ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾಗಿ ಕೆಳ ಹಂತದಿಂದ ಒಂದಲ್ಲ ಒಂದು ರೀತಿಯಲ್ಲಿ ಸ್ಥಾನ-ಮಾನಗಳನ್ನು ಗಳಿಸಿ ಉನ್ನತ ಸ್ಥಾನಕ್ಕೇರಿದ ಮಾನ್ಯ ಶ್ರೀ ಎನ್.ಚಿಕ್ಕೇಗೌಡರು ನಮ್ಮೆಲ್ಲರಿಗೂ ಆದರ್ಶಪ್ರಾಯರಾಗಿದ್ದಾರೆ. ಸಚಿವರಾಗಿ ಅವರಿಗೆ ವಹಿಸಿಕೊಟ್ಟ ಇಲಾಖೆಯನ್ನು ಅತ್ಯಂತ ಪ್ರಾಮಾಣಿಕರಾಗಿ ನಿರ್ವಹಿಸಿದ್ದಾರೆ. ಕೃಷಿ ಕ್ಷೇತ್ರದ ಅಭಿವೃದ್ಧಿಗಾಗಿ ಸದಾ ಹೋರಾಟ ಮಾಡುತ್ತಿದ್ದರು. ಇಂತಹವರ ನಿಧನದಿಂದ ಇಡೀ ರಾಜ್ಯಕ್ಕೆ ತುಂಬಲಾರದ ನಷ್ಟವುಂಟಾಗಿದೆ. ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಭಗವಂತನಲ್ಲಿ ಕೋರುತ್ತಾ, ಅವರ ಬಂಧು-ಬಳಗದವರಿಗೆ ಅವರ ಅಗಲಿಕೆಯಿಂದ ಉಂಟಾಗಿರುವ ದುಃಖವನ್ನು ಭರಿಸುವ ಶಕ್ತಿ ಕೊಡಲೆಂದು ದೇವರಲ್ಲಿ ಪ್ರಾರ್ಥಿಸುತ್ತಾ, ತಾವು ಮಂಡಿಸಿರುವ ಸೂಚನೆಗೆ ಮತ್ತೊಮ್ಮೆ ಬೆಂಬಲಿಸುತ್ತೇನೆ.

ಶ್ರೀ ಡಿ.ನಾಗರಾಜಯ್ಯ [ಕುಣಿಗಲ್] :- ಮಾನ್ಯ ಅಧ್ಯಕ್ಷರೆ, ಮಾನ್ಯ ಚಿಕ್ಕೇಗೌಡರು ಹಿಂದೆ ಈ ರಾಜ್ಯದ ಸಚಿವರಾಗಿ, ನಾಲ್ಕು ಬಾರಿ ಶಾಸಕರಾಗಿ, ತಾಲ್ಲೂಕು ಸಮಿತಿಯ ಅಧ್ಯಕ್ಷರಾಗಿ, ಹಾಲು ಉತ್ಪಾದಕರ ಸಂಘದ ಅಧ್ಯಕ್ಷರಾಗಿ ಈ ರಾಜ್ಯಕ್ಕೆ ಅತಿ ಹೆಚ್ಚಿನ ಸೇವೆ ಸಲ್ಲಿಸಿದ್ದಾರೆ. ರಾಜಕೀಯವಾಗಿ ಒಳ್ಳೆಯ ಕೊಡುಗೆಯನ್ನು ನೀಡಿದ್ದಾರೆ. ವೈಯಕ್ತಿಕವಾಗಿ ಅವರು ಈ ರಾಜ್ಯದ ವಿಧಾನ ಸಭೆಯಲ್ಲಿ ನಡೆದುಕೊಳ್ಳುತ್ತಿದ್ದಂತಹ ರೀತಿ ಮತ್ತು ನೀತಿ ನಮ್ಮೆಲ್ಲರಿಗೂ ಮಾದರಿಯಾಗಿದೆ. ಅವರು ಹೊಸಕೋಟೆಯಿಂದ ಆರಿಸಿ ಬಂದಿರುವವರ ಪೈಕಿಯಲ್ಲಿ ಅತಿ ಹೆಚ್ಚಿನ ಶಕ್ತಿಯುತವಾದಂತಹ ರಾಜಕಾರಣದಲ್ಲಿ ಪಳಗಿದವರಾಗಿದ್ದರು. ಅವರು ನಾಲ್ಕು ಬಾರಿ ಶಾಸಕರಾಗಿ ವಿಧಾನ ಸಭೆಯಲ್ಲಿ ಕಾರ್ಯನಿರ್ವಹಿಸಿದ್ದರು. ಜೊತೆಗೆ ಸಚಿವರಾಗಿಯೂ ಸಹ ಎರಡು ಬಾರಿ ಅವರು ಕಾರ್ಯನಿರ್ವಹಿಸಿದ್ದರು. ಅವರ ಹಿಂದಿನ ದಿನಗಳನ್ನು ನಾವು ಜ್ಞಾಪಿಸಿಕೊಳ್ಳಬೇಕಾದುದು ಅತಿ ಅವಶ್ಯಕ ಎನ್ನುವುದನ್ನು ಈ ಸಂದರ್ಭದಲ್ಲಿ ಹೇಳುತ್ತೇನೆ. ಇವತ್ತೇನು ಸಂತಾಪ ಸೂಚನಾ ನಿರ್ಣಯವನ್ನು ತಾವು ಮಂಡಿಸಿದ್ದೀರೋ, ಅದಕ್ಕೆ ನನ್ನ ಸಹಮತಿಯನ್ನು ವ್ಯಕ್ತಪಡಿಸುತ್ತೇನೆ. ಮಾನ್ಯ ಚಿಕ್ಕೇಗೌಡರ ಅಗಲಿಕೆಯಿಂದ ಉಂಟಾಗಿರುವ ದುಃಖವನ್ನು ಭರಿಸತಕ್ಕ ಶಕ್ತಿಯನ್ನು ಕುಟುಂಬ ವರ್ಗದವರಿಗೆ ಕೊಡಲೆಂದು ನಾವೆಲ್ಲರೂ ಸೇರಿ ದೇವರಲ್ಲಿ ಪ್ರಾರ್ಥನೆ

ಮಾಡೋಣ. ದಿವಂಗತರ ಆತ್ಮಕ್ಕೆ ಚಿರಶಾಂತಿ ಸಿಗಲೆಂದು ಆಶಿಸುತ್ತಾ, ನನ್ನ ಮಾತುಗಳನ್ನು ಮುಗಿಸುತ್ತೇನೆ.

ಅಧ್ಯಕ್ಷರು :– ಮೃತರ ಗೌರವಾರ್ಥ ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ತಮ್ಮಲ್ಲಿ ಪ್ರಾರ್ಥನೆ ಮಾಡಿಕೊಳ್ಳುತ್ತೇನೆ.

[ಈ ಹಂತದಲ್ಲಿ ಸದನವು ಮೃತರ ಗೌರವಾರ್ಥ ಎದ್ದು ನಿಂತು ಒಂದು ನಿಮಿಷ ಮೌನವನ್ನಾಚರಿಸಿತು]

ಸದನವು ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯವನ್ನು ಮೃತರ ಕುಟುಂಬವರ್ಗದವರಿಗೆ ಕಳುಹಿಸಿಕೊಡಲಾಗುವುದು.

ಶ್ರೀ ಕೆ.ಎಂ.ಶಿವಲಿಂಗೇಗೌಡ :– ಮಾನ್ಯ ಅಧ್ಯಕ್ಷರೆ, ನಿಯಮ 60ರ ಅಡಿಯಲ್ಲಿ ...

ಅಧ್ಯಕ್ಷರು :– ಒಂದು ನಿಮಿಷ. ನಂತರ ತಾವು ಮಾತನಾಡುವಿರಂತೆ. ಈಗ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳನ್ನು ಸಭೆಯಲ್ಲಿ ಮಂಡಿಸಬೇಕು.

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮೊದಲನೇ ಪಟ್ಟಿ

ಶ್ರೀ T.B. ಜಯಚಂದ್ರ [ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶು ಸಂಗೋಪನೆ ಸಚಿವರು] (ಮಾನ್ಯ ಮುಖ್ಯ ಮಂತ್ರಿಯವರ ಪರವಾಗಿ):– ಮಾನ್ಯ ಅಧ್ಯಕ್ಷರೆ

<u>1978 ರ ಕರ್ನಾಟಕ ರಾಜ್ಯ ನಾಗರಿಕ ಸೇವಾ ಅಧಿನಿಯಮದ ಪ್ರಕರಣ 8(3)ರ ಮೇರೆಗೆ</u> :

1. ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳನ್ನು ರಚಿಸಿ ದಿನಾಂಕ 07.03.2012ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ ಸಿಆಸುಇ 43 ಸೇವನೇ 2008ರಲ್ಲಿನ ನಿಯಮ 2ಕ್ಕೆ ತಿದ್ದುಪಡಿ ಮಾಡಿ ದಿನಾಂಕ 06.08.2012 ಹೊರಡಿಸಲಾದ ಅಧಿಸೂಚನೆ ಸಂಖ್ಯೆ : ಸಿಆಸುಇ 59 ಸೇವನೇ 2012.